Akashvani : Bangalore
Regional Bulletin In Kannada
17.05.2025 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಜಿಎಸ್‌ಟಿ ಸಂಗ್ರಹಿಸುವಲ್ಲಿ ದೇಶದಲ್ಲೇ ಮೊದಲ ಸ್ಥಾನ ಗಳಿಸಲು ಪ್ರಯತ್ನಿಸುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸಲಹೆ
- ವೈದ್ಯಕೀಯ, ದಂತ ವೈದ್ಯಕೀಯ ಶಿಕ್ಷಣ ಶುಲ್ಕ ಹೆಚ್ಚಳ ,ಮಾಡದಿರಲು ಸರ್ಕಾರದ ನಿರ್ಧಾರ
- ಬೆಂಗಳೂರು ಸೇರಿದಂತೆ ಕರಾವಳಿ ಜಿಲ್ಲೆಗಳಲ್ಲಿ ಮಳೆ ಹವಮಾನ ಇಲಾಖೆ ಮುನ್ಸೂಚನೆ
- ಐಪಿಎಲ್ ಟಿ-೨೦ ಕ್ರಿಕೆಟ್; ಟೂರ್ನಿ - ರಾಯಲ್ ಚಾಲೆಂಜರ್ಸ್ ಬೆಂಗಳೂರು-ಕೋಲ್ಕತ್ತಾ ನೈಟ್ ರೈಡರ್ಸ್ ಪಂದ್ಯಕ್ಕೆ ಕ್ಷಣಗಣನೆ

<><*<><>*><>

ಜಿಎಸ್‌ಟಿ ಸಂಗ್ರಹಣೆಯಲ್ಲಿ ದೇಶದಲ್ಲಿ ಮೊದಲ ಸ್ಥಾನ ಗಳಿಸಲು ಪ್ರಯತ್ನಿಸುವಂತೆ ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸಲಹೆ ನೀಡಿದ್ದಾರೆ. ಕರ್ನಾಟಕ ವಾಣಿಜ್ಯ ತೆರಿಗೆಗಳ ಸೇವಾ ಸಂಘ ಬೆಂಗಳೂರು ವತಿಯಿಂದ ಆಯೋಜಿಸಲಾಗಿದ್ದ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ನಿಮ್ಮೆಲ್ಲರ ಸಹಕಾರದಿಂದ ಆರ್ಥಿಕ ಇಲಾಖೆಯ ಜವಾಬ್ದಾರಿಯನ್ನು ದೀರ್ಘ ಕಾಲದವರೆಗೆ ನಿಭಾಯಿಸಲು ಸಾಧ್ಯವಾಯಿತು ಎಂದು ತಿಳಿಸಿದ್ದಾರೆ. ತೆರಿಗೆ ಸಂಗ್ರಹಣೆಯಲ್ಲಿ ವಾಣಿಜ್ಯ ತೆರಿಗೆ ಅಧಿಕಾರಿಗಳು ಪ್ರಮುಖ ಪಾತ್ರ ವಹಿಸುತ್ತಿದ್ದು, ಇದಕ್ಕಾಗಿ ಎಲ್ಲಾ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಕಳೆದ ವರ್ಷ ತೆರಿಗೆ ಸಂಗ್ರಹಣೆಗೆ ೧ಲಕ್ಷದ ೩,ಸಾವಿರ ಕೋಟಿ ಗುರಿನಿಗದಿಪಡಿಸಲಾಗಿದ್ದು, ಹೆಚ್ಚುವರಿ ೧೭ ಸಾವಿರ ಕೋಟಿ ತೆರಿಗೆ ಸಂಗ್ರಹಣೆ ಸಾಧಿಸಲಾಗಿತ್ತು. ಈ ವರ್ಷ ತೆರಿಗೆ ಸಂಗ್ರಹಣೆಗೆ ೧ಲಕ್ಷದ ೨೦ ಸಾವಿರ ಕೋಟಿಗಳ ಗುರಿ ನೀಡಲಾಗಿದ್ದು, ಅಧಿಕಾರಿಗಳು ಗುರಿಮೀರಿ ಸಾಧನೆ ಮಾಡುವಂತೆ ತಿಳಿಸಿದ್ದಾರೆ.

<><*<><>*><>

ಖಾಸಗಿ ವೈದ್ಯಕೀಯ ಕಾಲೇಜುಗಳ ಒತ್ತಡದ ಹೊರತಾಗಿಯೂ, ಮುಂದಿನ ಶೈಕ್ಷಣಿಕ ವರ್ಷಕ್ಕೆ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕ ವಿಚಾರದಲ್ಲಿ ಹೆಚ್ಚಳವಿಲ್ಲ ಎಂದು ರಾಜ್ಯ ಸರ್ಕಾರ ಸ್ಪಷ್ಟಪಡಿಸಿದೆ. ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ಈ ವಿಷಯ ಸ್ಪಷ್ಟಪಡಿಸಿದ್ದಾರೆ. ಖಾಸಗಿ ವೈದ್ಯಕೀಯ ಕಾಲೇಜು ಹಾಗೂ ದಂತ ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿಯ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಈ ನಿರ್ಧಾರ ಕೈಗೊಳ್ಳಲಾಗಿದೆ. ಖಾಸಗಿ ಕಾಲೇಜುಗಳು ಶೇ೧೦ ರಿಂದ ಶೇ೧೫ ರಷ್ಟು ಶುಲ್ಕ ಹೆಚ್ಚಳಕ್ಕೆ ಮನವಿ ಮಾಡಿದ್ದವು. ಆದರೆ ರಾಜ್ಯ ಸರ್ಕಾರದ ಕಳೆದ ವರ್ಷ ೧೦% ಹೆಚ್ಚಳಕ್ಕೆ ಅನುಮತಿ ನೀಡಿತ್ತು. ಆದರೆ ಈ ವರ್ಷ ಯಾವುದೇ ಹೆಚ್ಚಳಕ್ಕೆ ಅವಕಾಶವಿಲ್ಲ ಎಂದು ಸಚಿವರು ತಿಳಿಸಿದ್ದಾರೆ. ಈ ಕುರಿತು ಒಪ್ಪಂದಕ್ಕೆ ಅತಿ ಶೀಘ್ರದಲ್ಲೇ ಸಹಿ ಹಾಕಲಾಗುವುದು ಎಂದು ಹೇಳಿದ್ದಾರೆ.

<><*<><>*><>

ಅರಣ್ಯ ಸಂರಕ್ಷಣೆಯಲ್ಲಿ ಅರಣ್ಯವಾಸಿಗಳ ಪಾತ್ರ ಹಿರಿದಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ. ಬೆಳಗಾವಿ ಜಿಲ್ಲೆ, ಖಾನಾಪುರ ತಾಲೂಕು ಹೆಮ್ಮಡಗಾದಲ್ಲಿಂದು ಭೀಮಗಢ ಅರಣ್ಯ ವಲಯದ ತಳೇವಾಡಿ ಗ್ರಾಮದಿಂದ ಸ್ವಯಂ ಪ್ರೇರಿತವಾಗಿ ಕಾಡಿನಿಂದ ಹೊರಗೆ ಬರಲು ಇಚ್ಛಿಸಿರುವ ೨೭ ಕುಟುಂಬಗಳಿಗೆ ಚೆಕ್ ವಿತರಿಸಿ ಮಾತನಾಡಿದರು. ಹಿಂದಿನ ತಲೆಮಾರಿನ ಅರಣ್ಯವಾಸಿಗಳಿಗೆ ವನ್ಯಜೀವಿಗಳೊಂದಿಗೆ ಸಹಬಾಳ್ವೆ ನಡೆಸುವುದು ಚೆನ್ನಾಗಿ ತಿಳಿದಿತ್ತು, ಆದರೆ ಇಂದಿನ ಪೀಳಿಗೆಯ ಅರಣ್ಯವಾಸಿಗಳಿಗೆ ಅಷ್ಟು ಪರಿಣತಿ ಇಲ್ಲ. ಹೀಗಾಗಿ ನಾಗರಿಕ ಸಮಾಜದಲ್ಲಿ ಅವರು ಬದುಕು ಕಟ್ಟಿಕೊಳ್ಳಲು ಈ ಸ್ಥಳಾಂತರ ಸಹಕಾರಿಯಾಗಲಿದೆ ಎಂದರು. ೨೭ ಕುಟುಂಬಗಳಿಗೆ ನಿಯಮಾನುಸಾರ ಮತ್ತು ಕಾನೂನು ಬದ್ಧವಾಗಿ ಪ್ರಥಮ ಹಂತದಲ್ಲಿ ಒಂದು ಪರಿವಾರದ ಘಟಕಕ್ಕೆ ತಲಾ ೧೦ ಲಕ್ಷ ರೂಪಾಯಿ ನೀಡಲಾಗುತ್ತಿದೆ. ಉಳಿದ ೫ ಲಕ್ಷ ರೂಪಾಯಿಗಳನ್ನು ಅವರು ಸ್ಥಳಾಂತರ ಪ್ರಕ್ರಿಯೆ ಪೂರ್ಣಗೊಳಿಸಿದ ತರುವಾಯ ನೀಡಲಾಗುವುದು ಎಂದರು. ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಬೈಟ್ : ಸಚಿವ ಈಶ್ವರ ಖಂಡ್ರೆ

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆ ಪೋಡಿ ಮುಕ್ತ ಜಿಲ್ಲೆಯಾಗಿ, ಮುಂಚೂಣಿಯಲ್ಲಿದ್ದು, ಹಾಗೇ ಮುಂದುವರೆಸಿಕೊಂಡು ಹೋಗುವ ಜವಾಬ್ದಾರಿ ಅಧಿಕಾರಿಗಳ ಕೈಯಲ್ಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಕಂದಾಯ ಅಧಿಕಾರಿಗಳು ಹಾಗೂ ಸರ್ವೆ ಅಧಿಕಾರಿಗಳು ತ್ವರಿತಗತಿಯಲ್ಲಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ

**<><*<><>*><>**

ಭಾರತೀಯ ಸೇನಾ ಪಡೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೀರ ಸೇನಾನಿಗಳು ಜಾತಿ, ಧರ್ಮ ಮಾತ್ರವಲ್ಲ ರಾಜ್ಯಗಳ ಭಿನ್ನಾಭಿಪ್ರಾಯವನ್ನೂ ಬಿಟ್ಟು ದೇಶವೇ ಮೊದಲು ಎಂಬಂತೆ ಗಡಿಯಲ್ಲಿ ದೇಶದ ಸಂರಕ್ಷಣೆಗೆ ಮುಂದಾಗುತ್ತಾರೆ. ಪ್ರತಿಯೊಬ್ಬ ಬಾರತೀಯನು ಬೇಧಭಾವ ಮರೆತು ಇದೇ ರೀತಿ ಒಗ್ಗಟ್ಟಾಗಿ ಭಾರತದ ಪರ ವಹಿಸಬೇಕೆಂದು ಕೊಡಗು ಜಿಲ್ಲೆಯ ವಿರಾಜಪೇಟೆಯ ನಿವೃತ್ತ ಮೇಜರ್ ವೆಂಕಟಗಿರಿ ಅಭಿಪ್ರಾಯಪಡುತ್ತಾರೆ.

ಬೈಟ್ : ನಿವೃತ್ತ ಮೇಜರ್ ವೆಂಕಟಗಿರಿ

**<><*<><>*><>**

ಕಾರ್ಮಿಕರ ಹಿತರಕ್ಷಣೆಗೆ ಕ್ರಮವಹಿಸಿದ್ದು, ಕಾರ್ಮಿಕರ ಆರೋಗ್ಯ ರಕ್ಷಣೆಯನ್ನೇ ಮುಖ್ಯ ಗುರಿಯಾಗಿಸಿಟ್ಟುಕೊಂಡು ಕಾರ್ಮಿಕರಿಗೆ ಆರೋಗ್ಯ ಸೇವೆ ಒದಗಿಸಲು ವಾಹನವನ್ನು ಲೋಕಾರ್ಪಣೆಗೊಳಿಸಲಾಗಿದೆ ಎಂದು ಪರಿಶಿಷ್ಟ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಹೇಳಿದರು. ಶನಿವಾರ ದಂದು ನಗರದ ರಾಯಚೂರು ಗ್ರಾಮೀಣ ಶಾಸಕರ ಕಚೇರಿ ಆವರಣದಲ್ಲಿ ಕರ್ನಾಟಕ ಕಟ್ಟಡ ಮತ್ತು

ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಸಂಚಾರ ಆರೋಗ್ಯ ಘಟಕದ ವಾಹನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಕಾರ್ಮಿಕರಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಅವರಿದ್ದ ಕಡೆಗೇ ಈ ವಾಹನವು ಸಂಚರಿಸಿ ಅವರಿಗೆ ಆರೋಗ್ಯ ಸೇವೆ ಒದಗಿಸಲಿದೆ. ಸರ್ಕಾರದ ಈ ಯೋಜನೆಯ ಸೌಲಭ್ಯವನ್ನು ರಾಯಚೂರು ಗ್ರಾಮೀಣ ಕ್ಷೇತ್ರದ ಎಲ್ಲ ಕಾರ್ಮಿಕರು ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದರು.

<><*<><>*><>

ರಾಷ್ಟ್ರ ರಕ್ಷಣೆಗಾಗಿ ನಾಗರಿಕರ ಸಮಿತಿಯಿಂದ ಇಂದು ಬಳ್ಳಾರಿ ನಗರದಲ್ಲಿ ತಿರಂಗಯಾತ್ರೆ ನಡೆಯಿತು. ನಗರದ ದುರ್ಗಮ್ಮ ದೇವಸ್ಥಾನದಿಂದ ನೂರಾರು ಜನರು ರಾಷ್ಟ್ರ ಧ್ವಜ ಹಿಡಿದ, ಪಾಕ್ ಗೆ ಎಚ್ಚರಿಕೆ ನೀಡಿವ ಘೋಷಣೆ, ಮತ್ತು ದೇಶದ ಸೈನಿಕರಿಗೆ ನೈತಿಕ ಬೆಂಬಲದ ಫಲಕಗಳನ್ನು ಹಿಡಿದು ಆರಂಭಗೊಂಡ ಯಾತ್ರೆ ಗಡಗಿ ಚೆನ್ನಪ್ಪ ಸರ್ಕಲ್, ಬೆಂಗಳೂರು ರಸ್ತೆ, ಬ್ರೂಸ್ ಪೇಟೆ ಸರ್ಕಲ್, ತೇರು ಬೀದಿ ಮೂಲಕ ಗವಿಯಪ್ಪ ಸರ್ಕಲ್ ವರೆಗೆ ನಡೆಯಿತು. ಮಾಜಿ ಸಂಸದ ಸಣ್ಣ ಫಕ್ಕೀರಪ್ಪ, ಮಾಜಿ ಶಾಸಕ ಎಂ.ಎಸ್.ಸೋಮಲಿಂಗಪ್ಪ, ಪಾಲಿಕೆ ಸದಸ್ಯರು ಮೊದಲಾದವರು ಪಾಲ್ಗೊಂಡಿದ್ದರು.

<><*<><>*><>

ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ನಗರದಲ್ಲಿ ರಾಷ್ಟ್ರೀಯ ಡೆಂಘೀ ಜನಜಾಗೃತಿ ದಿನದ ಅಂಗವಾಗಿ ಜಾಥಾ ಮತ್ತು ಮಾನವ ಸರಪಳಿ ಕಾರ್ಯಕ್ರಮ ಜರುಗಿತು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಜಿಲ್ಲಾ ಮಟ್ಟದ "ರಾಷ್ಟ್ರೀಯ ಡೆಂಘೀ ದಿನ" ಜಾಥಾ ಮತ್ತು ಮಾನವ ಸರಪಳಿ ಪ್ರದರ್ಶನ ಜನಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಗದಗ ಜಿಲ್ಲೆಯಲ್ಲಿ ಡೆಂಘೀ ನಿಯಂತ್ರಣ ಮಾಡಲು ಗುಣಮಟ್ಟದ ಲಾರ್ವಾ ಸಮೀಕ್ಷೆ ಹಾಗೂ ಜ್ವರ ಸಮೀಕ್ಷೆ ಮಾಡಿ ಖಚಿತ ಪ್ರಕರಣಗಳು ಕಂಡು ಬಂದಲ್ಲಿ ಸೂಕ್ತ ಚಿಕಿತ್ಸೆ ನೀಡಿ, ಸೂಕ್ತ ಆರೈಕೆ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗು ಸಿಬ್ಬಂದಿ ವರ್ಗದವರಿಗೆ ಕರೆ ನೀಡಿದರು.

<><*<><>*><>

ರಾಜ್ಯದ ದಕ್ಷಿಣ ಒಳನಾಡು, ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರ್ನಾಟಕ್ ಒಳನಾಡಿನಲ್ಲಿ ಮಳೆ ಕಡಿಮೆಯಾಗಿದೆ. ರಾಜಧಾನಿ ಬೆಂಗಳೂರಿನ ಹಲವೆಡೆ ಗುಡುಗು ಸಹಿತ ಮಳೆಯಾಗುತ್ತಿದೆ. ಬೆಂಗಳೂರಿನ ಹಲವೆಡೆ ಮೋಡ ಕವಿದ ವಾತಾವರಣ ಇದ್ದು ಮುಂದಿನ ೨೪ ಗಂಟೆಗಳಲ್ಲಿ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷದಿಂದ ೧ ವಾರಗಳ ಕಾಲ ಸ್ಥಗಿತಗೊಂಡಿದ್ದ ೧೮ನೇ ಆವೃತ್ತಿಯ ಐಪಿಎಲ್ ಕ್ರಿಕೆಟ್ ಪಂದ್ಯ ಇಂದಿನಿಂದ ಪುನರಾರಂಭವಾಗುತ್ತಿದೆ. ಬೆಂಗಳೂರು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಕೊಲ್ಕೊತ್ತಾ ನೈಟ್ ರೈಡರ್ಸ್ ತಂಡಗಳು ಸೆಣಸಾಟ ನಡೆಸಲಿವೆ. ಪಂದ್ಯ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>